**All India Radio: Bangalore**
**Regional Bulletin In Kannada**
**05.03.2025 / 6.40 p.m.**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಒಂದು ಟ್ರಿಲಿಯನ್ ಆರ್ಥಿಕತೆಯ ಗುರಿ ಸಾಧಿಸಲು ರಾಜ್ಯ ಸಜ್ಜು - ವಿಧಾನಸಭೆಯಲ್ಲಿ ಶಾಸಕ ಟಿ.ಬಿ.ಜಯಚಂದ್ರ ಹೇಳಿಕೆ
2. ಕಟ್ಟಡ ಕಾರ್ಮಿಕರ ೨೬ ಲಕ್ಷ ನಕಲಿ ಕಾರ್ಡ್ ರದ್ದುಗೊಳಿಸಿದ ಸರ್ಕಾರ
3. ಗುತ್ತಿಗೆದಾರರ ಬಾಕಿ ಹಣ ಹಂತ-ಹಂತವಾಗಿ ಬಿಡುಗಡೆಗೆ ಲೋಕೋಪಯೋಗಿ ಇಲಾಖೆ ನಿರ್ಧಾರ
4. ಹಕ್ಕಿಜ್ವರ ಪ್ರಕರಣ; ಜನರು ಆತಂಕ ಪಡುವ ಅಗತ್ಯವಿಲ್ಲ - ಸಚಿವ ದಿನೇಶ್ ಗುಂಡೂರಾವ್
5. ಪರಿಶಿಷ್ಟರ ಹಣ ದುರ್ಬಳಕೆ ಆರೋಪ; ಸರ್ಕಾರದ ವಿರುದ್ಧ ಬಿಜೆಪಿ ಹೋರಾಟ

<><><><>

ರಾಜ್ಯ ಸರ್ಕಾರ ಜಾರಿಗೆ ತಂದ ಐದು ಗ್ಯಾರಂಟಿ ಯೋಜನೆಗಳು ಜನಸಾಮಾನ್ಯರ ಜೀವನ ಮಟ್ಟ ಸುಧಾರಣೆ ಜೊತೆಗೆ ರಾಜ್ಯದ ಆರ್ಥಿಕತೆಗೆ ಉತ್ತೇಜನ ನೀಡಿದೆ ಎಂದು ಹಿರಿಯ ಶಾಸಕ ಟಿ.ಬಿ.ಜಯಚಂದ್ರ ಅಭಿಪ್ರಾಯಪಟ್ಟಿದ್ದಾರೆ. ವಿಧಾನಸಭೆಯಲ್ಲಿಂದು ರಾಜ್ಯಪಾಲರ ಭಾಷಣಕ್ಕೆ ವಂದನಾ ನಿರ್ಣಯದ ಮೇಲೆ ಮಾತನಾಡಿದ ಅವರು ರಾಜ್ಯ ಸರ್ಕಾರ ಒಂದು ಟ್ರಿಲಿಯನ್ ಆರ್ಥಿಕತೆಯ ಗುರಿಸಾಧಿಸಲು ಸಜ್ಜಾಗಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು. ಬೆಂಗಳೂರು ನಗರಕ್ಕೆ ೩೧ ಟಿ ಎಂ ಸಿ ಕುಡಿಯುವ ನೀರಿನ ಅಗತ್ಯವಿದೆ. ಮೇಕೆದಾಟು ಯೋಜನೆ ಅನುಷ್ಠಾನದಿಂದ ರಾಜ್ಯಕ್ಕೆ ಹೆಚ್ಚುವರಿಯಾಗಿ ೬೭ ಟಿ ಎಂ ಸಿ ನೀರು ಸಿಗಲಿದೆ. ಇದರಿಂದ ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಹಳ್ಳಿಗಳ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಬಹುದಾಗಿದೆ. ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಿ ಮೇಕೆದಾಟು ಯೋಜನೆಯನ್ನು ಆದಷ್ಟು ಶೀಘ್ರ ಇತ್ಯರ್ಥಪಡಿಸಿ ಕರ್ನಾಟಕದ ಪಾಲಿನ ನೀರು ಸಿಗುವಂತೆ ಮಾಡಬೇಕು ಎಂದು ಒತ್ತಾಯಿಸಿದರು. ಕರ್ನಾಟಕದಿಂದ ಪ್ರತಿವರ್ಷ ಕೇಂದ್ರ ಸರ್ಕಾರಕ್ಕೆ ೪ ಲಕ್ಷ ೨೩ ಸಾವಿರ ಕೋಟಿ ರೂಪಾಯಿ ತೆರಿಗೆ ರೂಪದಲ್ಲಿ ಹೋಗುತ್ತದೆ. ಆದರೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಕೇವಲ ೫೦ ಸಾವಿರ ರೂಪಾಯಿ ವಾಪಾಸ್ ಬರುತ್ತಿದೆ. ಈ ವಿಷಯದಲ್ಲಿ ರಾಜ್ಯಕ್ಕೆ ಅನ್ಯಾಯವಾಗಿದೆ ಎಂದರು. ಇದೇ ವೇಳೆ, ಹುಣಸೆ ಹಣ್ಣಿನ ಬೆಳೆಗೆ ಉತ್ತಮ ಮಾರುಕಟ್ಟೆ ಕಲ್ಪಿಸಲು ಶಿರಾದಲ್ಲಿ ಹುಣಸೆ ಹಣ್ಣು ಸಂಸ್ಕರಣ ಪಾರ್ಕ್ ನಿರ್ಮಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಮಾಹಿತಿ ನೀಡಿದರು.

<><><><>

ರಾಜ್ಯದಲ್ಲಿದ್ದ ೫೬ ಲಕ್ಷ ಕಟ್ಟಡ ಕಾರ್ಮಿಕರ ಕಾರ್ಡ್‌ಗಳನ್ನು ತಪಾಸಣೆ ನಡೆಸಿ ೨೬ ಲಕ್ಷ ನಕಲಿ ಕಾರ್ಡ್‌ಳನ್ನು ರದ್ದುಪಡಿಸಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ವಿಧಾನ ಸಭೆಯಲ್ಲಿ ತಿಳಿಸಿದ್ದಾರೆ. ಸದಸ್ಯರಾದ ಮಹೇಶ ಟೆಂಗಿನಕಾಯಿ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು ಇನ್ಮುಂದೆಯೂ ನಕಲಿ ಕಾರ್ಡ್‌ಗಳನ್ನು ತಪಾಸಣೆ ನಡೆಸಿ ರದ್ದುಪಡಿಸಲಾಗುವುದು ಎಂದು ಹೇಳಿದ್ದಾರೆ. ೨೦೨೨ರಿಂದ ಈವರೆಗೆ ಮದುವೆಗೆ ಧನ ಸಹಾಯ ಕೋರಿ ೧ ಲಕ್ಷದ ೫೭ ಸಾವಿರದ ೧೭೪ ಅರ್ಜಿಗಳು ಬಂದಿದ್ದು, ೧ ಲಕ್ಷದ ೬ ಸಾವಿರದ ೯೧ ಅರ್ಜಿಗಳನ್ನು ಮಂಜೂರು ಮಾಡಲಾಗಿದೆ ಎಂದರು.

<><><><>

ಗುತ್ತಿಗೆದಾರರ ಬಾಕಿ ಇರುವ ಹಣವನ್ನು ಹಂತ ಹಂತವಾಗಿ ಬಿಡುಗಡೆ ಮಾಡಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ವಿಧಾನ ಪರಿಷತ್‌ನಲ್ಲಿ ಇಂದು ತಿಳಿಸಿದ್ದಾರೆ. ಜೆಡಿಎಸ್ ನ ಟಿ.ಎ ಶರವಣ ಪ್ರಶ್ನೆಗೆ ಉತ್ತರಿಸಿದ ಸಚಿವ ಸತೀಶ್ ಜಾರಕಿಹೊಳಿ, ಗುತ್ತಿಗೆದಾರರಿಗೆ ಒಟ್ಟು ೯ ಸಾವಿರ ಕೋಟಿ ಹಣ

ಬಾಕಿ ಇದೆ. ಗುತ್ತಿಗೆದಾರರು ಹಣ ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದಾರೆ. ಏಕಕಾಲದಲ್ಲಿ ಇಷ್ಟು ದೊಡ್ಡ ಮೊತ್ತದ ಹಣವನ್ನು ಬಿಡುಗಡೆ ಮಾಡಲು ಸಾಧ್ಯವಿಲ್ಲ. ಹೀಗಾಗಿ ಹಂತ ಹಂತವಾಗಿ ಬಾಕಿ ಮೊತ್ತ ಬಿಡುಗಡೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯದ ಹೋಟೆಲ್‌ಗಳಲ್ಲಿ, ರಸ್ತೆ ಬದಿಯಲ್ಲಿ ಜನರು ದಿನನಿತ್ಯ ಬಳಸುವ ಇಡ್ಲಿ. ರವೆ ಇಡ್ಲಿ, ಹೋಳಿಗೆ ಸೇರಿದಂತೆ ಅನೇಕ ಆಹಾರ ಪದಾರ್ಥಗಳಲ್ಲಿ ಪ್ಲಾಸ್ಟಿಕ್ ಬಳಸಿ ಆಹಾರ ಬೇಯಿಸುತ್ತಿರುವುದು ಅತ್ಯಂತ ಕಳವಳಕಾರಿ ಸಂಗತಿಯಾಗಿದೆ ಎಂದು  ಮೇಲ್ಮನೆಯಲ್ಲಿ ಬಿಜೆಪಿಯ ಸದಸ್ಯ ರವಿಕುಮಾರ್ ಗಮನ ಸೆಳೆದರು. ಶೂನ್ಯವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಇದರಿಂದ ರಾಜ್ಯದ ಜನರ ಆರೋಗ್ಯದ ಮೇಲೆ ನೇರ ಪರಿಣಾಮ ಬೀರಿ ಭೀಕರ ಕ್ಯಾನ್ಸರ್ ಮಾರಕ ಕಾಯಿಲೆ ಸೇರಿದಂತೆ ಅನೇಕ ಮಾರಣಾಂತಿಕ ಕಾಯಿಲೆಗಳು ಹರಡುತ್ತದೆ ಎಂದು ಅಭಿಪ್ರಾಯಪಟ್ಟರು. ಇದರಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳು ಶಾಮಿಲಾಗಿದ್ದಾರೆ ಎಂದು ಆರೋಪಿಸಿದರು. ಈ ಕುರಿತು ಸರ್ಕಾರ ಜಾಗೃತಿ ಮೂಡಿಸಬೇಕೆಂದು ಒತ್ತಾಯಿಸಿದರು.

<><><><>

ಹಕ್ಕಿ ಜ್ವರದ ಪ್ರಕರಣಗಳು ರಾಜ್ಯದ ಅಲ್ಲಲ್ಲಿ ವರದಿಯಾಗುತ್ತಿದ್ದು, ಜನರು ಭಯಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮೊಟ್ಟೆ ಮತ್ತು ಮಾಂಸವನ್ನು ೭೦ ಡಿಗ್ರಿ ಉಷ್ಣಾಂಶದಲ್ಲಿ ಅರ್ಧಗಂಟೆಗೂ ಹೆಚ್ಚು ಕಾಲ ಬೇಯಿಸಿ ಸೇವಿಸಬೇಕು ಎಂದು ಸಲಹೆ ನೀಡಿದ್ದಾರೆ. ಹಕ್ಕಿಜ್ವರ ಬರದಂತೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಟ್ಟೆಚ್ಚರ ವಹಿಸಲಾಗಿದ್ದು, ಆಂಧ್ರಪ್ರದೇಶ  ಗಡಿಯಲ್ಲಿ ಮೂರು ಚೆಕ್ ಪೋಸ್ಟ್‌ಗಳನ್ನು ತೆರೆಯಲಾಗಿದೆ. ಕೋಳಿಗಳ ಕೆಲವು ಮಾದರಿ ಪಡೆದು ಹಕ್ಕಿ ಜ್ವರ ಪರೀಕ್ಷೆಗಾಗಿ ಪ್ರಯೋಗಾಲಯಕ್ಕೆ ಕಳುಹಿಸಲಾಗುತ್ತಿದೆ ಎಂದು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ.ರಂಗಪ್ಪ ತಿಳಿಸಿದ್ದಾರೆ.

<><><><>

ಗ್ಯಾರಂಟಿ ಯೋಜನೆಗಳನ್ನು ಸರಿಯಾಗಿ ಅನುಷ್ಠಾನ ಮಾಡಲಾಗಿದೆ ಸರ್ಕಾರ ಪರಿಶಿಷ್ಟ ಜಾತಿ, ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣವನ್ನು ದುರುಪಯೋಗ ಪಡಿಸಿದೆ ಎಂದು ಬಿಜೆಪಿ ಇಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಿತು. ಈ ವೇಳೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ನಾಳೆಯೂ ಬೃಹತ್ ಹೋರಾಟ ನಡೆಯಲಿದೆ ಎಂದು ತಿಳಿಸಿದರು. ಇದೇ ವೇಳೆ ಮಾತನಾಡಿದ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಸರ್ಕಾರದ ಬೊಕ್ಕಸ ಖಾಲಿಯಾಗಿದ್ದು, ಪರಿಶಿಷ್ಟರಿಗೆ ಮೀಸಲಿಟ್ಟ ಹಣವನ್ನು ಗ್ಯಾರಂಟಿಗಳಿಗೆ ಬಳಸಲಾಗುತ್ತಿದೆ ಎಂದು ಆರೋಪಿಸಿದರು.

<><><><>

ಫೆಬ್ರವರಿ ತಿಂಗಳಿನಿಂದ ಆಹಾರ ಇಲಾಖೆ ಹಣದ ಬದಲಾಗಿ ಪಡಿತರ ಧಾನ್ಯವನ್ನು ಹಾಗೂ ಮಾರ್ಚ್ ತಿಂಗಳಿಂದ ೧೫ ಕೆಜಿ ಅಕ್ಕಿಯನ್ನು ನೀಡಲು ನಿರ್ಧರಿಸಿದೆ.  ಅನ್ನಭಾಗ್ಯ ಯೋಜನೆಯ ಕುರಿತು ವಿಜಯಪುರ ಜಿಲ್ಲಾ ಆಹಾರ ಇಲಾಖೆಯ ಉಪನಿರ್ದೇಶಕರಾದ ವಿನಯ್ ಕುಮಾರ್ ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

<><><><>

ಇದೇ ೮ ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ನಡೆಯಲಿದೆ. ಕರ್ನಾಟಕ ರಾಜ್ಯ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟ ವಿಜಯನಗರ ಜಿಲ್ಲಾ ಘಟಕವು ಹೊಸಪೇಟೆಯಲ್ಲಿ ಇದೇ ೭ ಮತ್ತು ೮ ರಂದು ಸಮಾನತೆ ಎಡೆಗೆ ನಮ್ಮ ನಡಿಗೆ, ಎಂಬ ಧ್ಯೇಯ ವಾಕ್ಯದೊಂದಿಗೆ ಹಕ್ಕೊತ್ತಾಯ ಜಾಥಾ ಮತ್ತು ಬೃಹತ್ ಸಾರ್ವಜನಿಕ ಸಮಾವೇಶ ಹಮ್ಮಿಕೊಂಡಿದೆ. ಮಹಿಳಾ ದಿನಾಚರಣೆಯಂದು ಸ್ಥಳೀಯ ಎಲ್ಲ ಸಂಘಟನೆಗಳ ಜೊತೆಗೂಡಿ  ಮಹಿಳಾ

ಶಕ್ತಿ ಪ್ರದರ್ಶನದ ಜೊತೆಗೆ ಜಿಲ್ಲೆಯಲ್ಲಿರುವ ಮಹಿಳಾ ಸಮಸ್ಯೆಗಳಿಗೆ ದನಿಯಾಗುವುದು ಮಹಿಳಾ ದಿನಾಚರಣೆಯ ಮೂಲ ಉದ್ದೇಶ ಎಂದು ಒಕ್ಕೂಟದ ಸದಸ್ಯೆ ಗೌರಿ ತಿಳಿಸಿದ್ದಾರೆ.

<><><><>

ಪ್ರಸಕ್ತ ಸಾಲಿನ ಬೇಸಿಗೆಯಲ್ಲಿ ಗ್ರಾಮ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಈಗಿನಿಂದಲೇ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಸೂಚನೆ ನೀಡಿದ್ದಾರೆ. ಕಾರವಾರದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಬೇಕಾದ ಪ್ರದೇಶಗಳ ಕುರಿತಂತೆ ಸಂಪೂರ್ಣ ಮಾಹಿತಿಯನ್ನು ಸಿದ್ಧಪಡಿಸಿಟ್ಟುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

<><><><>

ಸಂಕ್ಷಿಪ್ತ ಸುದ್ದಿಗಳು-೧

1. ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ದಕ್ಷಿಣ ಭಾರತದಲ್ಲಿ ಪ್ರಪ್ರಥಮ ಕ್ರಾಂತಿಯ ಕಿಚ್ಚು ಹೊತ್ತಿಸಿದ ಅಪ್ರತಿಮ ವೀರರ ಸಂಸ್ಥಾನವಾಗಿರುವ ಸುರಪುರ ಸಂಸ್ಥಾನ ನಮ್ಮ ಹೆಮ್ಮೆ ಎಂದು ಸುರಪುರ ಶಾಸಕ ರಾಜಾ ವೇಣುಗೋಪಾಲ್ ನಾಯಕ್ ಹೇಳಿದ್ದಾರೆ.
2. ರಾಜ್ಯದಲ್ಲಿ ಹೆಚ್ಚುತ್ತಿರುವ ತಾಪಮಾನದ ಹಿನ್ನೆಲೆಯಲ್ಲಿ ಮುಂಬರುವ ದಿನಗಳಲ್ಲಿ ಬಿಸಿ ಗಾಳಿ ಬೀಸುವ ಸಾಧ್ಯತೆ ಇದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮಕ್ಕಳು ಸೇರಿದಂತೆ ಜನ- ಜಾನುವಾರುಗಳು ಬಿಸಿಲಿನಿಂದ ರಕ್ಷಿಸಿಕೊಳ್ಳಲು ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಸಲಹೆ ತಿಳಿಸಿದ್ದಾರೆ.
3. ಕುಟುಂಬದ ಸದಸ್ಯರಿಂದಲೇ ನಡೆಯುವ ದೌರ್ಜನ್ಯ, ಹಿಂಸೆ ವಿರುದ್ಧ ಹೋರಾಡಲು ಮಹಿಳೆಯರಿಗೆ ಅರಿವು ಅಗತ್ಯ ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ ತಿಳಿಸಿದ್ದಾರೆ
4. ಸರ್ಕಾರದ ನಿಯಮ ಮೀರಿ ಸಣ್ಣ ಹಣಕಾಸು ಸಂಸ್ಥೆಗಳು ಗ್ರಾಹಕರ ಮೇಲೆ ದೌರ್ಜನ್ಯ ಎಸಗಿದಲ್ಲಿ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ಕೋಲಾರ ಸಹಕಾರ ಇಲಾಖೆಯ ಉಪನಿಬಂಧಕ ಕಿಶೋರ್ ಕುಮಾರ್ ತಿಳಿಸಿದ್ದಾರೆ.
5. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ವತಿಯಿಂದ ಚಿತ್ರದುರ್ಗ ನಗರದ ಬೆಂಗಳೂರು ಸರ್ವಿಸ್ ರಸ್ತೆಯಲ್ಲಿ ಸಿಎನ್‌ಜಿ ಅನಿಲ ಸೋರಿಕೆ ತಡೆಗಟ್ಟುವಿಕೆ ಸಂಬಂಧ ಅಣಕು ಪ್ರಾತ್ಯಕ್ಷಿತೆ ಕಾರ್ಯಾಚರಣೆ ನಡೆಯಿತು.
6. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನಿರ್ವಾಹಕರಾದ ವಿನಯ್ ಕುಮಾರ್.ವಿ ಮತ್ತು ವೈ.ಡಿ.ಶಶಿಧರ್ ದೋಹಾದ ಕತಾರ್ ನಲ್ಲಿ ಇದೇ ೧೩ರಿಂದ ದ ೧೭ರವರೆಗೆ ನಡೆಯಲಿರುವ ಕತಾರ್ ಅಂತರಾಷ್ಟ್ರೀಯ ಕಬಡ್ಡಿ ಚಾಂಪಿಯನ್ ಶಿಪ್-೨೦೨೫ ನಲ್ಲಿ ಭಾರತ ತಂಡವನ್ನು ಪ್ರತಿನಿಧಿಸಲಿದ್ದಾರೆ.
7. ಉಡುಪಿ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶ ವ್ಯಾಪ್ತಿಗಳಲ್ಲಿರುವ ಬಿ.ಎಸ್.ಎನ್.ಎಲ್ ಟವರ್‌ಗಳ ನಿರ್ವಹಣೆಯನ್ನು ವ್ಯವಸ್ಥಿತವಾಗಿ ಮಾಡುವಂತೆ ಉಡುಪಿ ಚಿಕ್ಕಮಗಳೂರು ಲೋಕಸಭಾ ಸಂಸದ ಕೋಟ ಶ್ರೀನಿವಾಸ ಪೂಜಾರಿ ಸೂಚನೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>